# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 225
ಸದಸ್ಯರ ಹೆಸರು : ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 11.07.2018
ಉತ್ತರಿಸುವ ಸಚಿವರು : ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 94 ಸಿ ಮತ್ತು 94 ಸಿಸಿ ಯೋಜನೆಯಲ್ಲಿ ಇಲ್ಲಿಯವರೆಗೆ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಮಂಜೂರಾದ. ತಿರಸ್ಕರಿಸಲಾದ ಹಾಗೂ ವಿಲೇವಾರಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94–ಸಿ ಮತ್ತು 94–ಸಿಸಿ ರಡಿಯಲ್ಲಿ ಕ್ರಮವಾಗಿ ಗ್ರಾಮಾಂತರ ಮತ್ತು ನಗರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ಅವಕಾಶವಿರುತ್ತದೆ. ವಿವರ ಈ ಕೆಳಕಂಡಂತಿದೆ:–<br>ಕಲಂ / ಸ್ವೀಕೃತಿ / ಮಂಜೂರಾತಿ / ತಿರಸ್ಕೃತ / ಬಾಕಿ<br>94–ಸಿ / 588293 / 128188 / 309388 / 142030<br>94–ಸಿಸಿ / 214214 / 44061 / 86736 / 80279 |
| ಆ) | ಮಂಜೂರಾದ ಅರ್ಜಿಗಳಲ್ಲಿ ಎಷ್ಟು ಹಕ್ಕುಪತ್ರಗಳನ್ನು ನೀಡಲಾಗಿದೆ; | ಹಕ್ಕು ಪತ್ರಗಳನ್ನು ನೀಡಿರುವ ಸಂಖ್ಯೆ ಈ ಕೆಳಕಂಡಂತಿದೆ:–<br>ಕಲಂ / ಹಕ್ಕು ಪತ್ರ ವಿತರಿಸಿರುವ ಸಂಖ್ಯೆ<br>94–ಸಿ / 86583<br>94–ಸಿಸಿ / 31415 |
| ಇ) | 94ಸಿ ಮತ್ತು 94ಸಿಸಿ ಯೋಜನೆಯಡಿ ಅರ್ಜಿ ವಿಲೇವಾರಿ, ಹಕ್ಕು ಪತ್ರ ನೀಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕಲಂ 94–ಸಿ ಮತ್ತು 94–ಸಿಸಿ ರಡಿಯಲ್ಲಿ ಅರ್ಜಿಗಳನ್ನು ಸ್ವೀಕರಿಸಿ, ಇತ್ಯರ್ಥಪಡಿಸಲು ತಾಲ್ಲೂಕಿನ ತಹಶೀಲ್ದಾರ್‌ರವರು ಸಕ್ಷಮ ಪ್ರಾಧಿಕಾರಗಳಾಗಿದ್ದು, ನಿಯಮಾನುಸಾರ ಅರ್ಜಿಗಳನ್ನು ವಿಲೇಗೊಳಿಸಿ ಹಕ್ಕುಪತ್ರಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬ ನೀತಿ ಅನುಸರಿಸಲಾಗುತ್ತಿಲ್ಲ. |
| ಈ) | 94ಸಿ ಮತ್ತು 94ಸಿಸಿ ಯಡಿ ಸಿ.ಆರ್.ಝಡ್., ಕುಮ್ಕಿ, ಗೋಮಾಳ, ಗೇರುಲೀಸ್, ಸಿ.ಎನ್.ಡಿ., ಡೀಮ್ಡ್ ಫಾರೆಸ್ಟ್ ವ್ಯಾಪ್ತಿಯಲ್ಲಿ ವಾಸವಿರುವ ಬಡವರಿಗೆ ಹಕ್ಕುಪತ್ರ ವಿತರಿಸಲು ಇರುವ ತೊಡಕುಗಳೇನು; ಈ ವ್ಯಾಪ್ತಿಗೆ ಒಳಡುವ ಒಟ್ಟು ಪ್ರಕರಣಗಳೆಷ್ಟು; ಡೀಮ್ಡ್ ಫಾರೆಸ್ಟ್, ಗೋಮಾಳ ಸಹಿತ ಅಡೆತಡೆ ವಿರಹಿತ ಪಡಿಸಿ ಹಕ್ಕುಪತ್ರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಸರ್ಕಾರಿ ಜಮೀನುಗಳಲ್ಲಿ ಮಾತ್ರ ಅನಧಿಕೃತವಾಗಿ ಕಟ್ಟಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94–ಸಿ ಮತ್ತು 94–ಸಿಸಿ ರಡಿಯಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ.<br><br>**ಆದರೆ,** ಸಿ.ಆರ್.ಝಡ್. ಪ್ರದೇಶದ ವ್ಯಾಪ್ತಿಯಲ್ಲಿ ಹಾಗೂ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 79(2) ರನ್ವಯ ಕುಮ್ಕಿ ಜಮೀನಿನಂತಹ ವಿಶೇಷ ಹಕ್ಕಿನ ಜಮೀನುಗಳು ಸೇರಿದಂತೆ ಗೋಮಾಳ, ಸಿ ಅಂಡ್ ಡಿ ಮತ್ತು ಡೀಮ್ಡ್ ಫಾರೆಸ್ಟ್ ಜಮೀನುಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>ಈ ವ್ಯಾಪ್ತಿಗೆ ಒಳಪಡುವ ಪ್ರಕರಣಗಳ ಒಟ್ಟು ಸಂಖ್ಯೆ: 3,98,713 |
| ಉ) | 94ಸಿ ಮತ್ತು 94ಸಿಸಿ ಯೋಜನೆಯಡಿ ಎಲ್ಲಾ ಅಡೆತಡೆಗಳನ್ನು ನಿವಾರಿಸಿ, ಯೋಜನೆಯ ಆಶಯದಂತೆ ಬಡವರಿಗೆ ಕಾಲಮಿತಿಯಲ್ಲಿ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು) | ಕಲಂ 94–ಸಿ ರಡಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು "ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಿಂದ ಒಂದು ವರ್ಷದ ಅವಧಿಯೊಳಗೆ" ಹಾಗೆಯೇ ಕಲಂ 94–ಸಿಸಿ ರಡಿಯಲ್ಲಿ "ಅರ್ಜಿ ಸಲ್ಲಿಸಿದ ದಿನಾಂಕದಿಂದ ಎರಡು ವರ್ಷಗಳ ಅವಧಿಯೊಳಗೆ" ನಿಯಮಾನುಸಾರ ಇತ್ಯರ್ಥಪಡಿಸಿ, ಅರ್ಹ ಫಲಾನುಭವಿಗಳಿಗೆ ಹಕ್ಕು ಪತ್ರ ನೀಡಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಆರ್‌ಡಿ 84 ಎಲ್‌ಜಿಕ್ಯೂ 2018**

ಆರ್.ವಿ.ದೇಶಪಾಂಡೆ
ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು